# ಕರ್ನಾಟಕ ಸರ್ಕಾರ

ಸಂಖ್ಯೆ:ಮಮಅಇ: ಮಕ: 1 :2020-21

ನಿರ್ದೇಶಕರ ಕಚೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
1ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:11.08.2020

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಎಲ್ಲಾ 30 ಜಿಲ್ಲೆಗಳು

ಮಾನ್ಯರೇ,

ವಿಷಯ : ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡುವ ಬಗ್ಗೆ.

* *** *

ಪ್ರತಿ ವರ್ಷ ರಾಜ್ಯಮಟ್ಟದಲ್ಲಿ ಆಯೋಜಿಸುವ ಮಕ್ಕಳ ದಿನಾಚರಣೆ ಕಾರ್ಯಕ್ರಮದಂದು ಕರ್ನಾಟಕ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ.25,000/- ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ಮತ್ತು ಸಂಸ್ಥೆಗಳಿಗೆ ತಲಾ ರೂ.1,00,000/- ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸುತ್ತಿದೆ.

2020ನೇ ಸಾಲಿನ ರಾಜ್ಯ ಪ್ರಶಸ್ತಿಗೆ ಕನಿಷ್ಠ 5 ವರ್ಷ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿ ಮತ್ತು ಸಂಸ್ಥೆಗಳನ್ನು ಆಯ್ಕೆ ಮಾಡಲು ಜಿಲ್ಲಾ ಉಪ ನಿರ್ದೇಶಕರು ಪ್ರಮುಖ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ, ಲಗತ್ತಿಸಿರುವ ನಮೂನೆಗಳಲ್ಲಿ ವ್ಯಕ್ತಿ ಮತ್ತು ಸಂಸ್ಥೆಗಳಿಂದ ಅರ್ಜಿಗಳನ್ನು ಅರ್ಹತೆ ಮತ್ತು ಮಾನದಂಡಗಳಾನುಸಾರ ಪರಿಶೀಲಿಸಿ, ಸಂಬಂಧಪಟ್ಟ ವ್ಯಕ್ತಿ ಹಾಗೂ ಸಂಸ್ಥೆಗಳು ನಿರ್ವಹಿಸಿರುವ ಕೆಲಸದ ಬಗ್ಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದ ವರದಿಯೊಂದಿಗೆ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯ ಶಿಫಾರಸ್ಸಿನೊಂದಿಗೆ ಪ್ರಶಸ್ತಿಗಾಗಿ ನಾಮ ನಿರ್ದೇಶನಗಳನ್ನು ದಿನಾಂಕ:30.09.2020 ರೊಳಗಾಗಿ ಪ್ರಧಾನ ಕಛೇರಿಗೆ ತಪ್ಪದೇ ಸಲ್ಲಿಸುವಂತೆ ಸೂಚಿಸಿದೆ.

ಈ ಕುರಿತು ಆಂಗ್ಲ ಮತ್ತು ಕನ್ನಡ ಭಾಷೆಯ ಪತ್ರಿಕಾ ಪ್ರಕಟಣೆಯ ಪ್ರತಿಗಳನ್ನು ಲಗತ್ತಿಸಿದೆ. ನಿಗಧಿಪಡಿಸಿದ ದಿನಾಂಕದ ನಂತರ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. **ಪ್ರಶಸ್ತಿಗಾಗಿ ಶಿಫಾರಸ್ಸು ಮಾಡುವ ವ್ಯಕ್ತಿ/ಸಂಸ್ಥೆಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಇಲ್ಲದಿರುವ ಬಗ್ಗೆ ಗುಪ್ತಚರ ಇಲಾಖೆಯಿಂದ (Intelligence Report) ವರದಿ ಪಡೆದು ಸಲ್ಲಿಸತಕ್ಕದ್ದು.**

ತಮ್ಮ ವಿಶ್ವಾಸಿ,

ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು.

ಪ್ರತಿಯನ್ನು:

1. ನಿರ್ದೇಶಕರು, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಪ್ರಧಾನ ಕಛೇರಿ, ಬೆಂಗಳೂರು ರವರಿಗೆ ಮಾಹಿತಿಗಾಗಿ
2. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, 30 ಜಿಲ್ಲೆಗಳು ಇವರಿಗೆ ಮಾಹಿತಿಗಾಗಿ

# ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ನಾಮ ನಿರ್ದೇಶನಗಳನ್ನು ಸಲ್ಲಿಸುವ ಬಗ್ಗೆ ಪತ್ರಿಕಾ ಪ್ರಕಟಣೆ

ಕರ್ನಾಟಕ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವಂತಹ ವ್ಯಕ್ತಿಗಳಿಗೆ ತಲಾ ರೂ.25,000/-ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ.1,00,000/- ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಮಕ್ಕಳ ದಿನಾಚರಣೆಯಂದು ಪ್ರದಾನ ಮಾಡಿ ಗೌರವಿಸುತ್ತದೆ.

2020ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ದ್ವಿಪ್ರತಿಯಲ್ಲಿ ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ದಿನಾಂಕ:15.09.2020ರೊಳಗೆ ಸಲ್ಲಿಸತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು.

ನಿರ್ದೇಶಕರು,<br>
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,<br>
ಬೆಂಗಳೂರು.

## PRESS NOTE REGARDING INVITATION OF APPLICATIONS FOR STATE AWARD FOR INDIVIDUALS AND INSTITUTIONS IN THE FIELD OF CHILD WELFARE

Government of Karnataka confers award to Individuals and Institutions who have worked for the welfare of children for more than 5 years. Individual award carries cash prize of Rs.25,000/- and a citation and Institutional award carries cash prize of Rs.1,00,000/- and a citation.

The prescribed forms for the year 2020 may be obtained from the Deputy Director of Women & Child Development Department in the respective Districts. The filled applications should be submitted to the concerned District Deputy Director of Women & Child Development Department on or before 15.09.2020. The applications received after due date will not be considered. The applications should be submitted in Kannada only.

Director,
Department of Women & Child Development,
Bengaluru

## ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಸ್ವಯಂ ಸೇವಾ ಸಂಸ್ಥೆಗಳಿಗೆ/ವ್ಯಕ್ತಿಗಳಿಗೆ ನೀಡಲಾಗುತ್ತಿರುವ ರಾಜ್ಯ ಪ್ರಶಸ್ತಿಗಳಿಗೆ ಆಯ್ಕೆ ಮಾಡಲು ಅರ್ಹತೆ ಮತ್ತು ಮಾನದಂಡಗಳು

### 1. ಮಕ್ಕಳ ಆರೋಗ್ಯ ಮತ್ತು ಪೌಷ್ಠಿಕಾಂಶ:-

- ಮಕ್ಕಳಿಗೆ ಉಚಿತ ಆರೋಗ್ಯ ತಪಸಣಾ ಶಿಬಿರ
- ಮಕ್ಕಳಿಗೆ ಉಚಿತ ಔಷಧಿ ವಿತರಣೆ
- ಮಕ್ಕಳಿಗೆ ಉಚಿತ ಆಸ್ಪತ್ರೆ/ಚಿಕಿತ್ಸೆ ವ್ಯವಸ್ಥೆ
- ಮಕ್ಕಳ ಆರೋಗ್ಯದ ಬಗ್ಗೆ ಪೋಷಕರಿಗೆ ಕ್ರಮಬದ್ಧ ಅರಿವು ಮೂಡಿಸುವ ಬಗ್ಗೆ ಉಚಿತ ಕಾರ್ಯಕ್ರಮ
- ಮಕ್ಕಳ ಆರೋಗ್ಯ ಸುಧಾರಣೆಗಾಗಿ ಮಕ್ಕಳಿಗೆ ಉಚಿತ ಪೌಷ್ಠಿಕಾಂಶ(ಶಕ್ತಿಯುತ ಆಹಾರ/ತರಕಾರಿ/ಹಣ್ಣು) ಸಹಾಯ
- ಮಕ್ಕಳ ಪೌಷ್ಠಿಕಾಂಶದ ಬಗ್ಗೆ ಪೋಷಕರಿಗೆ ಪ್ರಾತ್ಯಕ್ಷಿಕತೆಯೊಂದಿಗೆ ಕ್ರಮಬದ್ಧ ಅರಿವು ಮೂಡಿಸುವ ಉಚಿತ ಕಾರ್ಯಕ್ರಮ.

### 2. ಮಕ್ಕಳ ಶಿಕ್ಷಣ:-

- ಮಕ್ಕಳಿಗೆ ಉಚಿತ ಶಾಲೆ ನಡೆಸುತ್ತಿರುವುದು.
- ಮಕ್ಕಳಿಗೆ ಉಚಿತ ಮನೆಪಾಠ (ಟ್ಯೂಷನ್)
- ಬಡ ಮಕ್ಕಳಿಗೆ ಉಚಿತ ಸಮವಸ್ತ್ರ, ಪುಸ್ತಕ, ಊಟ ವಿತರಣೆ
- ಮಕ್ಕಳ ಪೋಷಕರ ಮನವೊಲಿಸಿ, ಮಕ್ಕಳನ್ನು ಶಾಲೆಗೆ ದಾಖಲಿಸುವುದು
- ಮಕ್ಕಳಿಗೆ ಉಚಿತ ವಸತಿನಿಲಯ ಸೌಲಭ್ಯ
- ಶಾಲೆ ಬಿಟ್ಟ ಮಕ್ಕಳನ್ನು ಉಚಿತವಾಗಿ ಅಭಿವೃದ್ಧಿಯಲ್ಲಿ ತೊಡಗಿಸುವುದು
- ಪೋಷಕರಿಗೆ/ಸಮುದಾಯಕ್ಕೆ ಮಕ್ಕಳ ಶಿಕ್ಷಣದ ಬಗ್ಗೆ ಮಕ್ಕಳಿಗೆ ಉಚಿತ ಅರಿವು ಕಾರ್ಯಕ್ರಮ

### 3. ಕಲೆ ಸಂಸ್ಕೃತಿ ಹಾಗೂ ಕ್ರೀಡೆಯ ಅಭಿವೃದ್ಧಿ:-

- ಮಕ್ಕಳಿಗೆ ಕ್ರೀಡೆಯಲ್ಲಿ ಕ್ರಮಬದ್ಧ ಹಾಗೂ ಸುಭದ್ರ ಉಚಿತ ತರಬೇತಿ ನೀಡುವುದು.
- ಮಕ್ಕಳಿಗೆ ಉಚಿತ ಆಟದ ಸಾಮಗ್ರಿ ಸರಬರಾಜು
- ಮಕ್ಕಳಿಗೆ ಕಲೆ, ಸಾಂಸ್ಕೃತಿಕ ಕಾರ್ಯಕ್ರಮದ ಬಗ್ಗೆ ತರಬೇತಿಯನ್ನು ಉಚಿತವಾಗಿ ನಡೆಸುವುದು.

- ಕಲೆ, ಸಾಂಸ್ಕೃತಿಕ ಮತ್ತು ಕ್ರೀಡೆ ಮುಂತಾದ ಚಟುವಟಿಕೆಗಳನ್ನು ನಿಯತವಾಗಿ ಉಚಿತವಾಗಿ ಏರ್ಪಡಿಸುವುದು.
- ಮಕ್ಕಳ ಮನೋವಿಕಾಸ, ಶಿಸ್ತು, ನೈತಿಕ ಬೆಳವಣಿಗೆಗೆ ಪೂರಕವಾಗುವಂತಹ ಚಟುವಟಿಕೆಗಳಲ್ಲಿ ತೊಡಗಿಸಿ ಉಚಿತವಾಗಿ ತರಬೇತಿ ನೀಡುವುದು.
- ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರವಾಸ ಕೈಗೊಳ್ಳಲು ಉಚಿತ ವ್ಯವಸ್ಥೆ ಕಲ್ಪಿಸುವುದು.

4. <u>ಮಕ್ಕಳ ರಕ್ಷಣೆ ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆ:-</u>
   - ಬಾಲ ಕಾರ್ಮಿಕತೆ, ಬಾಲ್ಯ ವಿವಾಹ, ಮಕ್ಕಳ ದುರುಪಯೋಗ, ದೇವದಾಸಿ ಪದ್ಧತಿ, ಈ ಬಗ್ಗೆ ಜನಜಾಗೃತಿ ಕಾರ್ಯಕ್ರಮ
   - ಇಂತಹ ಮಕ್ಕಳ ಹಕ್ಕುಗಳ ರಕ್ಷಣೆಗೆ ಕಾರ್ಯಕ್ರಮ
   - ಈ ಮಕ್ಕಳ ರಕ್ಷಣೆ, ಪುನರ್ವಸತಿ, ಕಾನೂನು ಬದ್ಧ ಹೋರಾಟಕ್ಕೆ ಪೋಷಕರಿಗೆ ಸಹಕಾರ
   - ಮೇಲಿನ ಅಂಶಗಳ ಬಗ್ಗೆ ಮಕ್ಕಳು/ಪೋಷಕರು/ಸಮುದಾಯ ಮುಂತಾದವುಗಳ ಬಗ್ಗೆ ತರಬೇತಿ, ಸಂಶೋಧನೆ, ಈ ಬಗ್ಗೆ ಕಿರುಹೊತ್ತಿಗೆಗಳನ್ನು ಪ್ರಕಟಿಸುವುದು.
   - ವಿಶೇಷ ಜಾತಿ/ಗುಂಪು/ಪಂಗಡಗಳ ಮಕ್ಕಳಿಗೆ ವಿಶೇಷ ಕಾರ್ಯಕ್ರಮ

5. <u>ವಿಶೇಷ ಮಕ್ಕಳು:-</u>
   - ಈ ಕ್ಷೇತ್ರದಲ್ಲಿ ಗುರುತರ ಸೇವೆಯನ್ನು ಹಮ್ಮಿಕೊಂಡಿರಬೇಕು, ವಸತಿ/ವಸತಿರಹಿತ ಸೇವೆಗಳ ವಿವರಗಳು ಪ್ರಸ್ತಾವನೆಯಲ್ಲಿ ಅಂಕಿ ಅಂಶಗಳನ್ನು ನಮೂದಿಸಬೇಕು.

ರಾಜ್ಯ ಪ್ರಶಸ್ತಿಗಳಿಗಾಗಿ ಬರುವ ಪ್ರತಿಯೊಂದು ಪ್ರಸ್ತಾವನೆಗಳಲ್ಲೂ 5 ವರ್ಷಗಳ ಸೇವೆಗಳನ್ನು ಈ ಮೇಲಿನ ಅಂಶಗಳಲ್ಲಿ ಕಾರ್ಯನಿರತರಾದ ಸ್ವಯಂ ಸೇವಾ ಸಂಸ್ಥೆಗಳ/ವ್ಯಕ್ತಿಗಳ ಪ್ರತಿಯೊಂದು ಅಂಶಗಳನ್ನು ಜಿಲ್ಲಾ ಉಪ ನಿರ್ದೇಶಕರು ಖುದ್ದಾಗಿ ಪರಿಶೀಲಿಸಿ, ವಿಮರ್ಶಿಸಿ, ಅರ್ಹ ಅರ್ಜಿಗಳ ಬಗ್ಗೆ ಸ್ಪಷ್ಟ ಅಭಿಪ್ರಾಯ ಹಾಗೂ ಶಿಫಾರಸ್ಸಿನೊಂದಿಗೆ ಅರ್ಜಿಗಳನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವುದು.

ಪ್ರತಿಯೊಂದು ವಿಭಾಗಗಳಲ್ಲೂ ಸಂಸ್ಥೆ ಮತ್ತು ವ್ಯಕ್ತಿಗಳಿಂದ ಉಚಿತವಾಗಿ ಸೌಲಭ್ಯ ಪಡೆದ ಒಟ್ಟು ಮಕ್ಕಳ ಸಂಖ್ಯೆ ಹಾಗೂ ತಗಲಿದ ಒಟ್ಟು ವೆಚ್ಚವನ್ನು ನಮೂದಿಸುವುದು.